# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 620 (588) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |
| ಉತ್ತರಿಸುವ ದಿನಾಂಕ | : | 21.02.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿಯಲ್ಲಿ ಹೊಸ ಆಟೋಮೊಬೈಲ್ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕಲಬುರಗಿಯಲ್ಲಿ ಬೃಹತ್ ಮತ್ತು ಮಧ್ಯಮ ಪ್ರಮಾಣದ ಹೊಸ ಆಟೋಮೊಬೈಲ್ ಕೈಗಾರಿಕೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಗಳು ಬಂದಿರುವುದಿಲ್ಲ. |
| ಆ | ಹಾಗಿದ್ದಲ್ಲಿ, ಸರ್ಕಾರ ಆಟೋಮೊಬೈಲ್ ಕೈಗಾರಿಕೆ ಸ್ಥಾಪಿಸಲು ಸಿದ್ಧಪಡಿಸಿಕೊಂಡಿರುವ ರೂಪು ರೇಷೆಗಳೇನು; (ವಿವರ ನೀಡುವುದು) | ರಾಜ್ಯ ಸರ್ಕಾರವು ನೇರವಾಗಿ ಯಾವುದೇ ಕೈಗಾರಿಕೆಗಳನ್ನು ಪ್ರಾರಂಭಿಸುವುದಿಲ್ಲ.<br><br>ಆದಾಗ್ಯೂ, ಖಾಸಗಿ ಉದ್ದಿಮೆದಾರು ಮಧ್ಯಮ ಮತ್ತು ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಲು ಆಸಕ್ತಿ ತೋರಿ ಪ್ರಸ್ತಾವನೆ ಸಲ್ಲಿಸಿದಲ್ಲಿ, ಈ ಕೈಗಾರಿಕೆಗಳಿಗೆ ಏಕಗವಾಕ್ಷಿ ಅನುಮೋದನಾ ಸಮಿತಿಗಳಲ್ಲಿ (SHLCC/ SLSWCC) ಅನುಮೋದನೆ ನೀಡಿ, ಸರ್ಕಾರದಿಂದ ಅಗತ್ಯ ಬೆಂಬಲ ಸೇವೆ ನೀಡಲಾಗುತ್ತದೆ. |
| ಇ | ಕಲಬುರಗಿಯ ಯಾವ ಸ್ಥಳದಲ್ಲಿ ಆಟೋಮೊಬೈಲ್ ಕೈಗಾರಿಕೆ ಸ್ಥಾಪಿಸಲಾಗುವುದು ಹಾಗೂ ಇದಕ್ಕೆ ತಗಲುವ ವೆಚ್ಚ ಎಷ್ಟು; ಮತ್ತು ಯಾವಾಗ ಪ್ರಾರಂಭಿಸಲಾಗುವುವು? (ವಿವರ ನೀಡುವುದು) | ಮುಂದುವರೆದಂತೆ, ಖಾಸಗಿ ಕೈಗಾರಿಕೋದ್ಯಮಗಳು ಆಟೋಮೊಬೈಲ್ ಉತ್ಪಾದನಾ ಕೈಗಾರಿಕೆ ಸ್ಥಾಪಿಸಲು ಮುಂದೆ ಬಂದಲ್ಲಿ, ಕೈಗಾರಿಕಾ ನೀತಿ 2020-25 ರನ್ವಯ ಈ ಕೆಳಕಂಡ ರಿಯಾಯಿತಿ ಹಾಗೂ ಉತ್ತೇಜನ ನೀಡಲಾಗುತ್ತದೆ.<br><br>1. ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ರಿಯಾಯಿತಿ<br>2. ವಹಿವಾಟು ಆಧರಿಸಿ ಹೂಡಿಕೆ ಉತ್ತೇಜನ ಸಹಾಯಧನ<br>3. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>4. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ<br>5. ಖಾಸಗಿ ಹೂಡಿಕೆದಾರರಿಂದ ಸಾಮಾನ್ಯ ತ್ಯಾಜ್ಯ ಸಂಸ್ಕರಣಾ ಘಟಕ (CETP)/ ಕೈಗಾರಿಕೆಗಳ ಅಪಾಯಕಾರಿ ತ್ಯಾಜ್ಯ ವಿಲೇವಾರಿ ಯೋಜನೆಗಳಿಗೆ ಸಹಾಯಧನ<br>6. ಆಂಕರ್ ಘಟಕ ಸಹಾಯಧನ ಇತ್ಯಾದಿ |

ಸಿಐ 33 ಎಸ್‌ಪಿಐ 2023

(ಡಾ. ಮುರುಗೇಶ್ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು